**ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, 6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-560003.**

ಸಂಖ್ಯೆ:ಎ8/ಎಸ್‌ಎಸ್‌ಎಲ್‌ಸಿ/ಜೂನ್-2022/04/2021-22 ದಿನಾಂಕ:19.05.2022

**ಅಧಿಸೂಚನೆ**

ವಿಷಯ:- ಜೂನ್-2022ರ ಮಾಹೆಯಲ್ಲಿ ಎಸ್.ಎಸ್.ಎಲ್.ಸಿ ಪೂರಕ ಪರೀಕ್ಷೆಗೆ ಅರ್ಹ ಪುನರಾವರ್ತಿತ ಅಭ್ಯರ್ಥಿಗಳ ನೋಂದಣಿ ಕುರಿತು.

*******

ಮಾರ್ಚ್/ಏಪ್ರಿಲ್-2022ರ ಎಸ್.ಎಸ್.ಎಲ್.ಸಿ ಪರೀಕ್ಷೆಯನ್ನು ಬರೆದು ಅನುತ್ತೀರ್ಣರಾದ ಅಭ್ಯರ್ಥಿಗಳಿಗೆ ಹಾಗೂ ಈ ಹಿಂದಿನ ಸಾಲುಗಳಲ್ಲಿ ಅನುತ್ತೀರ್ಣರಾದ ಎಲ್ಲಾ ಅರ್ಹ ಪುನರಾವರ್ತಿತ ಅಭ್ಯರ್ಥಿಗಳಿಗೆ ಜೂನ್-2022 ರಲ್ಲಿ ಎಸ್.ಎಸ್.ಎಲ್.ಸಿ ಪೂರಕ ಪರೀಕ್ಷೆಯನ್ನು ನಡೆಸಲಾಗುವುದು. ಈ ಹಿನ್ನೆಲೆಯಲ್ಲಿ ಅರ್ಹ ಪುನರಾವರ್ತಿತ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. 2002-03 ರಿಂದ 2021-22ರ ಮುಖ್ಯ ಪರೀಕ್ಷೆವರೆಗೆ ಮತ್ತು 2002-2003ಕ್ಕೂ ಹಿಂದಿನ ವರ್ಷಗಳಲ್ಲಿ ಅನುತ್ತೀರ್ಣರಾದ ಅರ್ಹ ಅಭ್ಯರ್ಥಿಗಳನ್ನು ಈ ಪೂರಕ ಪರೀಕ್ಷೆಗೆ ನೋಂದಾಯಿಸಲು ಕೆಳಕಂಡಂತೆ ಕ್ರಮವಹಿಸಲು ಸೂಚಿಸಲಾಗಿದೆ.

1. 2002-03 ರಿಂದ 2021-22ರ ಎಸ್.ಎಸ್.ಎಲ್.ಸಿ ಮುಖ್ಯ ಪರೀಕ್ಷೆವರೆಗೆ ಅನುತ್ತೀರ್ಣರಾದ ಅರ್ಹ ಅಭ್ಯರ್ಥಿಗಳನ್ನು ಶಾಲಾ ಮುಖ್ಯೋಪಾಧ್ಯಾಯರು ಮಂಡಳಿಯ https://sslc.karnataka.gov.in ಜಾಲತಾಣದ ಶಾಲಾ ಲಾಗಿನ್ ಮೂಲಕ ನೋಂದಣಿ ಮಾಡುವುದು. ಶಾಲಾ ಲಾಗಿನ್‌ನಲ್ಲಿ Registration for June 2022 Examನ್ನು ಕ್ಲಿಕ್‌ಮಾಡಿದಾಗ Upload Repeaters Details ಎನ್ನುವ ಆಯ್ಕೆ ದೊರಕುತ್ತದೆ. ಈ ಆಯ್ಕೆಯಲ್ಲಿ ಅನುತ್ತೀರ್ಣರಾದ ವಿದ್ಯಾರ್ಥಿಗಳ ನೋಂದಣಿ ಸಂಖ್ಯೆಯನ್ನು ನಮೂದು ಮಾಡಲು ಅವಕಾಶ ನೀಡಲಾಗಿದೆ. ಪರೀಕ್ಷೆಗೆ ನೋಂದಾಯಿಸಿಕೊಳ್ಳುವ ವಿದ್ಯಾರ್ಥಿಯ ನೋಂದಣಿ ಸಂಖ್ಯೆಯನ್ನು ನಮೂದು ಮಾಡಿ Submit ಕೊಟ್ಟಾಗ ಆ ವಿದ್ಯಾರ್ಥಿಯ ವಿವರಗಳು ತೆರೆದುಕೊಳ್ಳುತ್ತವೆ. ವಿದ್ಯಾರ್ಥಿಯ ಹೆಸರು, ತಂದೆಯ ಹೆಸರು, ತಾಯಿಯ ಹೆಸರು, ಮಾಧ್ಯಮ, ದೈಹಿಕ ಸ್ಥಿತಿ, ಜನ್ಮ ದಿನಾಂಕ, ಪರೀಕ್ಷೆ ತೆಗೆದುಕೊಳ್ಳುತ್ತಿರುವ ಅಭ್ಯರ್ಥಿಗಳ ಭಾಷಾ ಸಂಯೋಜನೆ ಹಾಗೂ ಕೋರ್ ವಿಷಯಗಳ ಬದಲಾವಣೆ ಮಾಡಲು ಅವಕಾಶವಿರುವುದಿಲ್ಲ.

   ಮಾರ್ಚ್/ಏಪ್ರಿಲ್ 2022ರ ಎಸ್.ಎಸ್.ಎಲ್.ಸಿ ಮುಖ್ಯ ಪರೀಕ್ಷೆಗೆ ನೋಂದಾಯಿಸಿಕೊಂಡು ಅನುತ್ತೀರ್ಣರಾದ ವಿದ್ಯಾರ್ಥಿಗಳ ಭಾವಚಿತ್ರ ಮತ್ತು ಸಹಿಗಳು ಮಂಡಳಿಯಲ್ಲಿ ಲಭ್ಯವಿದ್ದು, ಸದರಿ ಅಭ್ಯರ್ಥಿಗಳು ಈ ಪೂರಕ ಪರೀಕ್ಷೆಗೆ ನೋಂದಾಯಿಸಿಕೊಂಡಲ್ಲಿ ಪುನ: ಇವರುಗಳ ಭಾವಚಿತ್ರ ಮತ್ತು ಸಹಿಗಳನ್ನು ಅಪ್‌ಲೋಡ್ ಮಾಡುವ ಅವಶ್ಯಕತೆ ಇರುವುದಿಲ್ಲ. ಇವರನ್ನು ಹೊರತುಪಡಿಸಿ ಜೂನ್-2022ರ ಪೂರಕ ಪರೀಕ್ಷೆಗೆ ಹಾಜರಾಗುವ ಉಳಿದ ಅರ್ಹ ಅನುತ್ತೀರ್ಣ ವಿದ್ಯಾರ್ಥಿಗಳ ಭಾವಚಿತ್ರ (60-80 kb) ಹಾಗೂ ಸಹಿ (40-50 kb) ಯಲ್ಲಿ ಸ್ಕ್ಯಾನ್ ಮಾಡಿಟ್ಟುಕೊಂಡು ಅಪ್‌ಲೋಡ್ ಮಾಡಿ save ಮಾಡುವುದು.

   ಒಟ್ಟಾರೆ ಮೇಲಿನಂತೆ ಜೂನ್-2022ರ ಪೂರಕ ಪರೀಕ್ಷೆಗೆ ನೋಂದಾಯಿಸಿಕೊಂಡ ಅಭ್ಯರ್ಥಿಗಳ ಮಾಹಿತಿ ವಿವರಗಳು ಭಾವಚಿತ್ರ ಮತ್ತು ಸಹಿಗಳು ಕ್ರಮಬದ್ಧವಾಗಿದೆಯೇ ಎಂಬುದನ್ನು ಖಚಿತಪಡಿಸಿಕೊಂಡು save ಮಾಡುವುದು.

2. 2003ಕ್ಕೂ ಹಿಂದಿನ ವರ್ಷಗಳಲ್ಲಿ ಅನುತ್ತೀರ್ಣರಾದ ವಿದ್ಯಾರ್ಥಿಗಳನ್ನು ಪರೀಕ್ಷೆಗೆ ನೋಂದಾಯಿಸಲು ಈ ಹಿಂದೆ ಇದ್ದಂತೆ MSA ಅರ್ಜಿಗಳನ್ನು ಭರ್ತಿ ಮಾಡಿ ಅರ್ಜಿ ಮೂಲಕ ಸಲ್ಲಿಸಬಹುದಾಗಿದೆ. ಈ ವಿದ್ಯಾರ್ಥಿಗಳಿಗೆ ಆನ್‌ಲೈನ್‌ನಲ್ಲಿ ನೋಂದಾಯಿಸಲು ಅವಕಾಶ ಕಲ್ಪಿಸಲಾಗಿರುವುದಿಲ್ಲ. ಇಂತಹ ಅಭ್ಯರ್ಥಿಗಳ ಎಂ.ಎಸ್.ಎ ಫಾರಂನಲ್ಲಿ ವಿದ್ಯಾರ್ಥಿಯ ಇತ್ತೀಚಿನ ಪಾಸ್‌ಪೋರ್ಟ್ ಅಳತೆಯ 2 ಭಾವಚಿತ್ರಗಳನ್ನು ಅಂಟಿಸಿ ಧೃಡೀಕರಿಸಿ ಸಲ್ಲಿಸಬೇಕು. ಎಂ.ಎಸ್.ಎ ಅರ್ಜಿಗಳನ್ನು ಪರಿಶೀಲಿಸುವಾಗ ಎಂ.ಎಸ್.ಎ ನಲ್ಲಿರುವ ಶಾಲಾ ಸಂಕೇತವು ತಮ್ಮ ಶಾಲೆಯದೇ ಎಂಬುದನ್ನು ಖಚಿತಪಡಿಸಿಕೊಳ್ಳುವುದು. ಈ ವಿದ್ಯಾರ್ಥಿಗಳ ಪರೀಕ್ಷಾ ಶುಲ್ಕವನ್ನು ನಿಗದಿತ ಬ್ಯಾಂಕ್ NEFT ಚಲನ್ ಮೂಲಕ ಪಾವತಿಸಿ ಎಂ.ಎಸ್.ಎ ಅರ್ಜಿ, ಭಾವಚಿತ್ರ, ಶುಲ್ಕ ಪಾವತಿಯ ಚಲನ್‌ನೊಂದಿಗೆ ಮಂಡಳಿಗೆ ಸಲ್ಲಿಸುವುದು. ಈ ಮೂರು ಮಾಹಿತಿಗಳಿದ್ದಲ್ಲಿ ಮಾತ್ರ ಅರ್ಜಿಗಳನ್ನು ಪರಿಗಣಿಸಲಾಗುವುದು. ಇಲ್ಲವಾದಲ್ಲಿ ವಿದ್ಯಾರ್ಥಿಗಳ ಅರ್ಜಿಗಳನ್ನು ತಿರಸ್ಕರಿಸಲಾಗುತ್ತದೆ. ಒಂದು ವೇಳೆ ಈ ವಿದ್ಯಾರ್ಥಿಗಳ ಎಂ.ಎಸ್.ಎ ಗಳು ಶಾಲೆಯಲ್ಲಿ ಲಭ್ಯವಿಲ್ಲದಿದ್ದಲ್ಲಿ ಮಂಡಳಿಯ ವಿಭಾಗೀಯ ಕಛೇರಿಗಳಿಂದ ನಿಗಧಿತ ಶುಲ್ಕ ಪಾವತಿಸಿ ಪಡೆದು ಸಲ್ಲಿಸುವುದು ಕಡ್ಡಾಯ.

3. 2011 ರಿಂದ ಜೂನ್ 2019ರ ಪೂರಕ ಪರೀಕ್ಷೆಗೆ ವರೆಗೆ ಅನುತ್ತೀರ್ಣರಾದ ಅಭ್ಯರ್ಥಿಗಳಿಗೆ 6 ಪ್ರಯತ್ನಗಳು ಮುಕ್ತಾಯಗೊಂಡಿರುವುದರಿಂದ ಜೂನ್ 2022ರ ಪೂರಕ ಪರೀಕ್ಷೆಯನ್ನು ಈ ಅಭ್ಯರ್ಥಿಗಳು ತೆಗೆದುಕೊಳ್ಳಲು ಅವಕಾಶವಿರುವುದಿಲ್ಲ. ಈ ಅಭ್ಯರ್ಥಿಗಳು ಮಾರ್ಚ್/ಏಪ್ರಿಲ್-2023ರ ಪರೀಕ್ಷೆಗೆ ಹೊಸದಾಗಿ ಖಾಸಗಿ ವಿದ್ಯಾರ್ಥಿಯಾಗಿ ನೋಂದಾಯಿಸಿಕೊಂಡು ಎಲ್ಲಾ 06 ವಿಷಯಗಳ ಪರೀಕ್ಷೆಗೆ ಹಾಜರಾಗಬೇಕಾಗುತ್ತದೆ. ಖಾಸಗಿ ಅಭ್ಯರ್ಥಿ ಪರೀಕ್ಷೆಗೆ ಕುಳಿತುಕೊಳ್ಳಲು ವಿಧಿಸಿರುವ ಷರತ್ತುಗಳನ್ನು ಪಾಲಿಸಬೇಕು.

4. ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯ ಅಧಿಸೂಚನೆ ಸಂಖ್ಯೆ:ಎ8/ಪು.ಆ.ಪ್ರ/13/2010-11, ದಿನಾಂಕ:18.03.2011 ರನ್ವಯ ಏಪ್ರಿಲ್-2011ರ ನಂತರ ಪರೀಕ್ಷೆ ತೆಗೆದುಕೊಂಡ ಶಾಲಾ ಹಾಗೂ ಪುನರಾವರ್ತಿತ ವಿದ್ಯಾರ್ಥಿಗಳು 6 ಸತತ ಪರೀಕ್ಷೆಗಳಲ್ಲಿ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ತೇರ್ಗಡೆ ಹೊಂದಬೇಕು. ಈ ಬಗ್ಗೆ ಈ ಕಛೇರಿಯ ಸುತ್ತೋಲೆಗಳಲ್ಲಿ ಮತ್ತು ಮಾರ್ಗದರ್ಶಿ ಕೈಪಿಡಿಗಳಲ್ಲಿ ವಿಸ್ತಾರವಾಗಿ ವಿವರಿಸಲಾಗಿದೆ. ಇದರನ್ವಯ ಜೂನ್/ಜುಲೈ-2020ರ ಮುಖ್ಯ ಪರೀಕ್ಷೆಯಲ್ಲಿ ಕುಳಿತು ತೇರ್ಗಡೆಯಾಗದ ಪರೀಕ್ಷಾರ್ಥಿಗಳಿಗೆ ಜೂನ್-2022ರ ಪೂರಕ ಪರೀಕ್ಷೆ ಕಡೆಯ ಅವಕಾಶವಾಗಿರುತ್ತದೆ. ಆದ್ದರಿಂದ ನಿಮ್ಮ ಶಾಲಾ/ಕಾಲೇಜುಗಳಲ್ಲಿ ಇಂತಹ ವಿದ್ಯಾರ್ಥಿಗಳಿದ್ದಲ್ಲಿ, ಕಡೆಯ ಅವಕಾಶವನ್ನು ಸದುಪಯೋಗ ಪಡಿಸಿಕೊಳ್ಳುವಂತೆ ತಿಳಿಸಿದೆ. 06 ಪ್ರಯತ್ನಗಳ ನಂತರವೂ ಅನುತ್ತೀರ್ಣರಾದಲ್ಲಿ ಖಾಸಗಿ ಅಭ್ಯರ್ಥಿಯಾಗಿ ನೋಂದಾವಣೆಯಾಗಿ ಹೊಸದಾಗಿ ಆರು ವಿಷಯಗಳಿಗೂ ಪರೀಕ್ಷೆಗೆ ಹಾಜರಾಗಬೇಕಾಗುತ್ತದೆ.

5. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದ ಹಾಗೂ ವಿಭಿನ್ನಸಾಮರ್ಥ್ಯವುಳ್ಳ ವಿದ್ಯಾರ್ಥಿಗಳಿಗೆ ಮಾತ್ರ ಪೂರಕ ಪರೀಕ್ಷೆಯ ಪರೀಕ್ಷಾ ಶುಲ್ಕದಿಂದ ವಿನಾಯಿತಿ ನೀಡಲಾಗಿದೆ.

**<u>ಅನುತ್ತೀರ್ಣ ವಿದ್ಯಾರ್ಥಿಗಳು ಪಾವತಿಸಬೇಕಾಗಿರುವ ಪರೀಕ್ಷಾ ಶುಲ್ಕದ ವಿವರಗಳು:</u>**

| ಕ್ರಮ ಸಂಖ್ಯೆ | ಪರೀಕ್ಷಾ ಶುಲ್ಕದ ವಿವರ |
|---|---|
| 01 | ಒಂದು ವಿಷಯಕ್ಕೆ ರೂ.370/- (ಮೂರು ನೂರ ಎಪ್ಪತ್ತು ರೂಪಾಯಿಗಳು) |
| 02 | ಎರಡು ವಿಷಯಕ್ಕೆ ರೂ.461/- (ನಾಲ್ಕು ನೂರ ಅರವತ್ತೊಂದು ರೂಪಾಯಿಗಳು) |
| 03 | ಮೂರು ಅಥವಾ ಮೂರಕ್ಕಿಂತ ಮೇಲ್ಪಟ್ಟು ರೂ.620/- (ಆರು ನೂರ ಇಪ್ಪತ್ತು ರೂಪಾಯಿಗಳು) |

**ಆನ್‌ಲೈನ್‌ನಲ್ಲಿ ಪರೀಕ್ಷಾ ಅರ್ಜಿಯನ್ನು ನೋಂದಾಯಿಸಲು ಹಾಗೂ NEFT ಚಲನ್ ಮೂಲಕ ಬ್ಯಾಂಕ್‌ಗೆ ಪರೀಕ್ಷಾ ಶುಲ್ಕ ಪಾವತಿಸಲು ನಿಗಧಿಪಡಿಸಿದ ದಿನಾಂಕ:-**

| ಕ್ರ ಸಂ | ವಿವರ | ನಿಗದಿಪಡಿಸಿರುವ ದಿನಾಂಕ |
|---|---|---|
| 1 | ಮಂಡಳಿ ಜಾಲತಾಣದ ಶಾಲಾಲಾಗಿನ್ ಮೂಲಕ ವಿದ್ಯಾರ್ಥಿಗಳ ಮಾಹಿತಿಯನ್ನು ಅಪ್‌ಲೋಡ್ ಮಾಡಲು **ಪ್ರಾರಂಭ** ದಿನಾಂಕ | 20.05.2022 |
| 2 | ಮಂಡಳಿ ಜಾಲತಾಣದ ಶಾಲಾಲಾಗಿನ್ ಮೂಲಕ ವಿದ್ಯಾರ್ಥಿಗಳ ಮಾಹಿತಿಯನ್ನು ಅಪ್‌ಲೋಡ್ ಮಾಡಲು ನಿಗದಿಪಡಿಸಿದ **ಅಂತಿಮ** ದಿನಾಂಕ: | 30.05.2022 |
| 3 | ಮಂಡಳಿ ಜಾಲತಾಣದ ಶಾಲಾಲಾಗಿನ್ ಮೂಲಕ ವಿದ್ಯಾರ್ಥಿಗಳ ಪರೀಕ್ಷಾ ಶುಲ್ಕದ ಚಲನ್ ಮುದ್ರಿಸಿಕೊಳ್ಳಲು ನಿಗದಿಪಡಿಸಿದ ದಿನಾಂಕ: | 31.05.2022 ರಿಂದ 02.06.2022 |
| 4 | ಕ್ರಮ ಸಂಖ್ಯೆ-3ರಂತೆ ಚಲನ್ ಮುದ್ರಿಸಿಕೊಂಡು ಬ್ಯಾಂಕ್‌ಗೆ ಜಮೆ ಮಾಡಲು ನಿಗದಿಪಡಿಸಿದ ದಿನಾಂಕ | 31.05.2022 ರಿಂದ 03.06.2022 |
| 5 | 2002 ಮತ್ತು ಹಿಂದಿನ ವರ್ಷಗಳ ಪರೀಕ್ಷೆಯಲ್ಲಿ ಅನುತ್ತೀರ್ಣರಾದ ಪುನರಾವರ್ತಿತ ಅಭ್ಯರ್ಥಿಗಳ (NSR & NSPR) ಪರೀಕ್ಷಾ ಶುಲ್ಕವನ್ನು ಹಳೆಯ ಪದ್ದತಿಯಂತೆ ಮಂಡಳಿಯ ನೆಫ್ಟ್ ಚಲನ್ ಮೂಲಕ ರಾಷ್ಟ್ರೀಕೃತ ಬ್ಯಾಂಕಿನಲ್ಲಿ ಪಾವತಿಸಲು ನಿಗದಿಪಡಿಸಿದ **ಅಂತಿಮ** ದಿನಾಂಕ | 03.06.2022 |
| 6 | **ಕೆಳಕಂಡ ದಾಖಲೆಗಳನ್ನು ಮಂಡಳಿಗೆ ಸಲ್ಲಿಸಲು ನಿಗಧಿಪಡಿಸಿದ ಅಂತಿಮ ದಿನಾಂಕ**<br>• ವಿದ್ಯಾರ್ಥಿಗಳ ಪರೀಕ್ಷಾ ಶುಲ್ಕವನ್ನೊಳಗೊಂಡಂತೆ ಶಾಲಾಲಾಗಿನ್‌ನಲ್ಲಿ ಸೃಜಿಸಲಾಗುವ ಚಲನ್ ಬಳಸಿಕೊಂಡು ಶುಲ್ಕ ಪಾವತಿಸಿದ ಮೂಲ ಚಲನ್<br>• 2002 ಮತ್ತು ಹಿಂದಿನ ವರ್ಷಗಳ ಪರೀಕ್ಷೆಯಲ್ಲಿ ಅನುತ್ತೀರ್ಣರಾದ ಪುನರಾವರ್ತಿತ ಅಭ್ಯರ್ಥಿಗಳ (NSR & NSPR) ಎಂಎಸ್‌ಎ ಮತ್ತು ಹಿಂದಿನ ಪದ್ದತಿಯಂತೆ ಮಂಡಳಿ ನೆಫ್ಟ್ ಚಲನ್ ಮೂಲಕ ಶುಲ್ಕ ಪಾವತಿಸಿದ ಮೂಲ ಚಲನ್<br>• ನಾಮಿನಲ್‌ರೋಲ್ ಮತ್ತು ಸಂಬಂಧಿಸಿದ ಇತರೆ ದಾಖಲೆಗಳು | 08.06.2022 |

6. ಪರೀಕ್ಷಾರ್ಥಿಗಳ ಪರೀಕ್ಷಾ ಶುಲ್ಕವನ್ನು ಪಾವತಿಸಲು ಮತ್ತು ಆನ್‌ಲೈನ್‌ನಲ್ಲಿ ಅಭ್ಯರ್ಥಿಗಳ ವಿವರಗಳನ್ನು ನೋಂದಾಯಿಸಲು ಮೇಲೆ ನಿಗಧಿಪಡಿಸಿರುವ ದಿನಾಂಕದ ನಂತರ ಜಾಲತಾಣದಲ್ಲಿ ಅಪ್‌ಲೋಡ್ ಮಾಡಲು ಅವಕಾಶವಿರುವುದಿಲ್ಲ.

7. ಖಾಸಗಿ ಅಭ್ಯರ್ಥಿಗಳು ಪ್ರಥಮ ಬಾರಿಗೆ ಈ ಪರೀಕ್ಷೆ ತೆಗೆದುಕೊಳ್ಳಲು ಅರ್ಹರಲ್ಲ. ಮಾರ್ಚ್/ಏಪ್ರಿಲ್-2022ರ ಪರೀಕ್ಷೆಗೆ ಶುಲ್ಕ ಪಾವತಿಸಿ ಪ್ರವೇಶ ಪತ್ರ ಪಡೆದು ಅನಾರೋಗ್ಯ, ಅಪಘಾತದಿಂದ ಆಸ್ಪತ್ರೆಗೆ ಚಿಕಿತ್ಸೆಗೊಳಗಾಗಿ ದಾಖಲಾದ ಪ್ರಕರಣಗಳಲ್ಲಿ, ಮತ್ತು ಇನ್ನಿತರೆ ಕಾರಣಗಳಿಂದ ಆ ಪರೀಕ್ಷೆಯನ್ನು ತೆಗೆದುಕೊಳ್ಳದ ವಿದ್ಯಾರ್ಥಿಗಳು ಜೂನ್-2022ರ ಪೂರಕ ಪರೀಕ್ಷೆಗೆ ನಿಗಧಿತ ಪರೀಕ್ಷಾ ಶುಲ್ಕ ಪಾವತಿಸಿ ಪರೀಕ್ಷೆಯನ್ನು ತೆಗೆದುಕೊಳ್ಳಬಹುದು.

8. ಇತರೆ ಶಾಲೆಯ ವಿದ್ಯಾರ್ಥಿಗಳ ಅರ್ಜಿಗಳನ್ನು ಯಾವುದೇ ಕಾರಣಗಳಿಂದ ತಮ್ಮ ಶಾಲೆಯ ಮುಖೇನ ಸಲ್ಲಿಸುವುದನ್ನು ಕಡ್ಡಾಯವಾಗಿ ನಿಷೇಧಿಸಲಾಗಿದೆ.

9. 2003ಕ್ಕೂ ಹಿಂದಿನ ಪುನರಾವರ್ತಿತ ಅಭ್ಯರ್ಥಿಗಳು ಪರೀಕ್ಷಾ ಶುಲ್ಕವನ್ನು ನಿಗಧಿತ **ಬ್ಯಾಂಕ್ NEFT ಚಲನ್** ಮೂಲಕ ರಾಷ್ಟ್ರೀಕೃತ ಬ್ಯಾಂಕುಗಳಲ್ಲಿ ಪಾವತಿಸಿ ಎಂಎಸ್ಎ ಪ್ರತಿಯೊಂದಿಗೆ ಮೂಲ ಚಲನ್ ಪ್ರತಿಯನ್ನು ಮಂಡಳಿಗೆ ಸಲ್ಲಿಸುವುದು. ಮೇಲೆ ನಿಗಧಿಪಡಿಸಿದ ದಿನಾಂಕದ ನಂತರ ಬಂದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ ಎಂಬುದನ್ನು ಇನ್ನೊಮ್ಮೆ ಶಾಲಾ ಮುಖ್ಯಸ್ಥರಿಗೆ ಸ್ಪಷ್ಟವಾಗಿ ತಿಳಿಸಿದೆ.

10. ಅನುತ್ತೀರ್ಣ ವಿದ್ಯಾರ್ಥಿಗಳು ಛಾಯಾಪ್ರತಿ, ಮರುಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸಿದ್ದಲ್ಲಿ ಫಲಿತಾಂಶಕ್ಕೆ ಕಾಯದೆ ಜೂನ್–2022ರ ಎಸ್.ಎಸ್.ಎಲ್.ಸಿ ಪೂರಕ ಪರೀಕ್ಷೆಗಾಗಿ **ನಿಗಧಿತ ದಿನಾಂಕದೊಳಗೆ** ಶುಲ್ಕ ಪಾವತಿಸಿ ನೋಂದಾಯಿಸಿಕೊಳ್ಳುವುದು ಕಡ್ಡಾಯವಾಗಿರುತ್ತದೆ.

11. ಪರೀಕ್ಷಾರ್ಥಿಗಳಿಂದ ಪರೀಕ್ಷಾ ಶುಲ್ಕ ಸ್ವೀಕರಿಸಲು ನಿಗಧಿಪಡಿಸಿದ ಕೊನೆಯ ದಿನಾಂಕದ ನಂತರ ಜೂನ್ 2022ರ ಪೂರಕ ಪರೀಕ್ಷೆಗೆ ಹಾಜರಾಗುವ ವಿದ್ಯಾರ್ಥಿಗಳ ನಾಮಾಯಾದಿ ಪಟ್ಟಿ (Nominal Roll)ಯನ್ನು Download ಮಾಡುವುದು. ನಂತರ ಪರೀಕ್ಷಾ ಶುಲ್ಕದ ಚಲನ್‌ನ್ನು Generate ಮಾಡಿ ಚಲನ್‌ನಲ್ಲಿ ಮುದ್ರಿತವಾದ ಪರೀಕ್ಷಾ ಶುಲ್ಕವನ್ನು ಬ್ಯಾಂಕ್‌ಗೆ ಜಮಾ ಮಾಡುವುದು.

12. ಶಾಲಾ ಮುಖ್ಯಸ್ಥರು ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳ ಶುಲ್ಕವನ್ನು ಮಂಡಳಿ **ಜಾಲತಾಣದ ಶಾಲಾ ಲಾಗಿನ್‌ನಲ್ಲಿ ಚಲನ್ ಜನರೇಟ್ ಮಾಡಿಕೊಂಡು ರಾಷ್ಟ್ರೀಕೃತ ಬ್ಯಾಂಕ್‌ನಲ್ಲೇ ಜಮಾ ಮಾಡಬೇಕು.** ಆನ್‌ಲೈನ್ ಮೂಲಕ ವಿದ್ಯಾರ್ಥಿಗಳ ವಿವರಗಳನ್ನು ನೋಂದಣಿ ಮಾಡಿದ ನಂತರ ನಾಮಯಾದಿ ಪಟ್ಟಿ (Nominal Roll) Download ಮಾಡಿಕೊಂಡು, ಮೂಲ ಬ್ಯಾಂಕ್ ಚಲನ್‌ನೊಂದಿಗೆ ನಿಗಧಿತ ದಿನಾಂಕದೊಳಗೆ ಈ ಕೆಳಗೆ ವಿವರಿಸಿರುವ ಶಾಖಾಧಿಕಾರಿಗಳಿಗೆ ತಲುಪುವಂತೆ ಕ್ರಮವಹಿಸುವುದು. ಯಾವುದೇ ಕಾರಣಕ್ಕೂ ವಿಭಾಗೀಯ ಕಾರ್ಯದರ್ಶಿಗಳಿಗಾಗಲಿ, ಜಿಲ್ಲಾ ಉಪನಿರ್ದೇಶಕರಿಗಾಗಲಿ ಅಥವಾ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗಾಗಲಿ ಈ ಅರ್ಜಿಗಳನ್ನು ಸಲ್ಲಿಸಬಾರದು. ಲಕೋಟೆಯ ಮೇಲೆ **ಜೂನ್–2022ರ ಎಸ್.ಎಸ್.ಎಲ್.ಸಿ. ಪೂರಕ ಪರೀಕ್ಷೆಯ ಚಲನ್** ಎಂದು ಬರೆಯುವುದು.

13. 2003ಕ್ಕೂ ಹಿಂದಿನ ವರ್ಷಗಳಲ್ಲಿ ಅನುತ್ತೀರ್ಣರಾದ ವಿದ್ಯಾರ್ಥಿಗಳ ಎಂ.ಎಸ್.ಎ ಮೂಲಕ ಸಲ್ಲಿಸುವ ಪ್ರಸ್ತಾವನೆಯ ಲಕೋಟೆಯ ಮೇಲೆ **ಜೂನ್–2022ರ ಎಸ್.ಎಸ್.ಎಲ್.ಸಿ ಪೂರಕ ಪರೀಕ್ಷೆಯ ಅರ್ಜಿಗಳು** ಎಂದು ಬರೆಯುವುದು ಹಾಗೂ ನಿಮ್ಮ ಜಿಲ್ಲೆಗೆ ಸಂಬಂಧಿಸಿದ ಮಂಡಳಿಯ ಅಧಿಕಾರಿಗಳ ಹೆಸರು ಮತ್ತು ಶಾಖೆಯನ್ನು ಲಕೋಟೆಯ ಮೇಲೆ ತಪ್ಪದೇ ಬರೆಯುವುದು.

14. ಮಂಡಳಿ ನಿಗದಿಪಡಿಸಿರುವ ಅಂತಿಮ ದಿನಾಂಕ **"ಸಾರ್ವತ್ರಿಕ ರಜಾ ದಿನ"** ಎಂಬುದಾಗಿ ಘೋಷಿಸಿದ್ದಲ್ಲಿ ಮಾರನೇ ಕೆಲಸದ ದಿನವನ್ನು ಕೊನೆಯ ದಿನಾಂಕವೆಂದು ಪರಿಗಣಿಸುವುದು. ಈ ಕೆಳಗೆ ನಮೂದಿಸಿರುವ ಮಂಡಳಿಯ ಅಧಿಕಾರಿಗಳು ಮತ್ತು ಉಸ್ತುವಾರಿ ನಿರ್ವಹಿಸುವ ಜಿಲ್ಲೆಗಳ ವಿವರಗಳನ್ನು ನೀಡಿದೆ. ಸಂಬಂಧಿಸಿದ ಶಾಲಾ ಮುಖ್ಯಸ್ಥರು ನಿಮ್ಮ ಜಿಲ್ಲೆಗೆ ಸಂಬಂಧಿಸಿದ ಅಧಿಕಾರಿಗಳ ಹೆಸರನ್ನು ಲಕೋಟೆಯ ಮೇಲೆ ತಪ್ಪದೇ ಬರೆಯಬೇಕು.

15. ಜೂನ್–2022ರ ಎಸ್.ಎಸ್.ಎಲ್.ಸಿ ಪೂರಕ ಪರೀಕ್ಷೆಯ ವೇಳಾಪಟ್ಟಿಯನ್ನು ಮಂಡಳಿ ಜಾಲತಾಣದಲ್ಲಿ ಪ್ರಕಟಸಲಾಗಿದ್ದು, ಡೌನ್‌ಲೋಡ್ ಮಾಡಿಕೊಳ್ಳಲು ತಿಳಿಸಿದೆ.

**ಜೂನ್-2022ರ ಎಸ್.ಎಸ್.ಎಲ್.ಸಿ. ಪೂರಕ ಪರೀಕ್ಷೆಗೆ ಕೆಳಕಂಡ ದಾಖಲೆಗಳನ್ನು ಶಾಲಾ ಮುಖ್ಯೋಪಾಧ್ಯಾಯರು ದಿನಾಂಕ: 08.06.2022 ರೊಳಗೆ ಸಲ್ಲಿಸುವುದು ಕಡ್ಡಾಯ.**

1. ಮುಖಪುಟ (Covering Letter)
2. ಆನ್‌ಲೈನ್ ಮೂಲಕ Download ಮಾಡಿಕೊಂಡ ನಾಮಯಾದಿ ಪಟ್ಟಿ (Nominal Roll)
3. ಶುಲ್ಕ ಪಾವತಿಸಿದ ಮೂಲ ನೆಫ್ಟ್ ಚಲನ್- (Original NEFT Challan)
4. 2003ಕ್ಕೂ ಹಿಂದಿನ ವರ್ಷಗಳ ಪರೀಕ್ಷೆಯಲ್ಲಿ ಅನುತ್ತೀರ್ಣರಾದ NSR/NSPR ಅಭ್ಯರ್ಥಿಗಳ ಎಂಎಸ್‌ಎ ಮತ್ತು ನಾಮಿನಲ್ ರೋಲ್‌ಗಳನ್ನು ಸಲ್ಲಿಸುವುದು.

| ಕ್ರ ಸಂ | ಶಾಖೆ | ಪರಿಶೀಲನಾ ಅಧಿಕಾರಿಗಳು ಶ್ರೀಮತಿ: ಶ್ರೀ | ಜಿಲ್ಲೆ | ದೂರವಾಣಿ ಸಂಖ್ಯೆ | ಕಛೇರಿಯ ದೂರವಾಣಿ |
|---|---|---|---|---|---|
| 1 | ಎಫ್ | ಹೆಚ್ ಎಸ್ ಸಂಧ್ಯಾ<br>ಸಹಾಯಕ ನಿರ್ದೇಶಕರು | ಬೆಂಗಳೂರು ದಕ್ಷಿಣ / ಹಾವೇರಿ / ಶಿವಮೊಗ್ಗ | 9886846881 | 08023345579 / 08023344676 |
| 2 | ಜಿ | ಬಿ ನರೇಂದ್ರಕುಮಾರ್<br>ಸಹಾಯಕ ನಿರ್ದೇಶಕರು | ಬೆಂಗಳೂರು ಉತ್ತರ / ಚಿಕ್ಕಬಳ್ಳಾಪುರ / ಕೋಲಾರ | 9900190492 | 08023345579 / 08023344676 |
| 3 | ಹೆಚ್ | ಎಂ.ಎನ್.ಶ್ರೀನಿವಾಸ್<br>ಸಹಾಯಕ ನಿರ್ದೇಶಕರು | ಚಿತ್ರದುರ್ಗ/ದಾವಣಗೆರೆ/ ಬೆಂಗಳೂರು ಗ್ರಾಮಾಂತರ/ ರಾಮನಗರ | 9449052591 | 08023345579 / 08023344676 |
| 4 | ಐ | ಗೋಪಿನಂದನ್<br>ಸಹಾಯಕ ನಿರ್ದೇಶಕರು | ಚಾಮರಾಜನಗರ/ಮಂಡ್ಯ/ ತುಮಕೂರು/ ಮಧುಗಿರಿ | 9449524725 | 08023345579 / 08023344676 |
| 5 | ಜೆ | ಬಾಗ್ಯವತಮ್ಮ<br>ಸಹಾಯಕ ನಿರ್ದೇಶಕರು | ಮೈಸೂರು/ ಹಾಸನ/ ಚಿಕ್ಕಮಗಳೂರು/ ಕೊಡಗು | 9449812887 | 08023345579 / 08023344676 |
| 6 | ಕೆ | ಗಾಯಿತ್ರಿ ದೇವಿ<br>ಹಿರಿಯ ಸಹಾಯಕ ನಿರ್ದೇಶಕರು | ಗದಗ/ ಕೊಪ್ಪಳ/ ಬಿಜಾಪುರ/ ಬಾಗಲಕೋಟೆ | 9986090437 | 08023345579 / 08023344676 |
| 7 | ಎಲ್ | ಜಯರಾಮುಡು<br>ಸಹಾಯಕ ನಿರ್ದೇಶಕರು | ಧಾರವಾಡ/ ಚಿಕ್ಕೋಡಿ/ ಬೆಳಗಾವಿ | 9449674952 | 08023345579 / 08023344676 |
| 8 | ಎಂ | ಗಿರೀಶ್ ಸಿ ಜಿ<br>ಹಿರಿಯ ಸಹಾಯಕ ನಿರ್ದೇಶಕರು | ಮಂಗಳೂರು/ ಉಡುಪಿ/ ಕಾರವಾರ/ಶಿರಸಿ/ ರಾಯಚೂರು | 9448542295 | 08023345579 / 08023344676 |
| 9 | ಎನ್ | ಸಿ ವಿ ನಟರಾಜ್,<br>ಹಿರಿಯ ಸಹಾಯಕ ನಿರ್ದೇಶಕರು | ಗುಲ್ಬರ್ಗಾ/ ಯಾದಗಿರಿ/ ಬೀದರ್/ ಬಳ್ಳಾರಿ | 7892937084 | 08023345579 / 08023344676 |

**ವಿಶೇಷ ಸೂಚನೆ:**

1. 2021-22ನೇ ಸಾಲಿಗೆ ಮಾನ್ಯತೆ ನವೀಕರಣವಾಗದ ಶಾಲೆಗಳಲ್ಲಿನ ವಿದ್ಯಾರ್ಥಿಗಳನ್ನು ಹತ್ತಿರದ ಸರ್ಕಾರಿ / ಮಾನ್ಯತೆ ಪಡೆದ ಖಾಸಗಿ ಪ್ರೌಢಶಾಲೆಗಳ ಮೂಲಕ ಮಾರ್ಚ್/ಏಪ್ರಿಲ್-2022ರ ಮುಖ್ಯ ಪರೀಕ್ಷೆಗೆ ಹಾಜರುಪಡಿಸಲಾಗಿದ್ದು, ಈ ವಿದ್ಯಾರ್ಥಿಗಳಲ್ಲಿ ಅನುತ್ತೀರ್ಣರಾದ ವಿದ್ಯಾರ್ಥಿಗಳು ಮಾರ್ಚ್/ಏಪ್ರಿಲ್-2022ರ ಮುಖ್ಯ ಪರೀಕ್ಷೆಯ ಫಲಿತಾಂಶ ಪ್ರಕಟವಾದ ಶಾಲೆಯಿಂದಲೇ ಈ ಪೂರಕ ಪರೀಕ್ಷೆಗೆ ನೋಂದಾಯಿಸುವುದು. ಈ ಬಗ್ಗೆ ಸಂಬಂಧಿಸಿದ ಮುಖ್ಯ ಶಿಕ್ಷಕರು ಸೂಕ್ತಕ್ರಮವಹಿಸುವುದು.

2. ಈ ಅಧಿಸೂಚನೆಯಲ್ಲಿ ವಿವರಿಸಿರುವ ಎಲ್ಲಾ ಅಂಶಗಳನ್ನು ಮನನ ಮಾಡಿಕೊಂಡು ಮಾರ್ಚ್/ಏಪ್ರಿಲ್ 2022ರ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಗೈರುಹಾಜರಾದ ಅರ್ಹ ವಿದ್ಯಾರ್ಥಿಗಳಿಗೆ / ಅನುತ್ತೀರ್ಣಗೊಂಡ ವಿದ್ಯಾರ್ಥಿಗಳಿಗೆ ಹಾಗೂ ಪುನರಾವರ್ತಿತ ಅಭ್ಯರ್ಥಿಗಳ/ಪೋಷಕರ ಗಮನಕ್ಕೆ ಎಲ್ಲಾ ಮಾಹಿತಿಗಳನ್ನು ತಂದು ಜೂನ್–2022ರ ಪೂರಕ ಪರೀಕ್ಷೆಗೆ ನಿಗಧಿತ ಸಮಯದೊಳಗೆ ನೋಂದಾಯಿಸಲು ಅಗತ್ಯ ಕ್ರಮಕೈಗೊಳ್ಳಲು ತಿಳಿಸಿದೆ.

**ಪೂರಕ ಪರೀಕ್ಷೆಯ ನೋಂದಣೆ ಇತ್ಯಾದಿ ವಿಷಯಗಳ ಕುರಿತು ಯಾವುದೇ ಮಾಹಿತಿ ಪಡೆಯಲು ಕೆಳಕಂಡ ಸಹಾಯವಾಣಿ ಸಂಖ್ಯೆಗಳಿಗೆ ಕರೆಮಾಡಿ ಮಾಹಿತಿ ಪಡೆಯಬಹುದಾಗಿರುತ್ತದೆ.**

**080– 23310075**
**080– 23310076**
**080– 23562267**
**080– 23561271**

(ಹೆಚ್.ಎನ್.ಗೋಪಾಲಕೃಷ್ಣ)
ನಿರ್ದೇಶಕರು ಪರೀಕ್ಷೆಗಳು

**ಇವರಿಗೆ,**

1. ರಾಜ್ಯದ ಎಲ್ಲಾ ಉಪನಿರ್ದೇಶಕರು (ಆಡಳಿತ)ರವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ.
2. ರಾಜ್ಯದ ಎಲ್ಲಾ ಜಿಲ್ಲಾ ನೋಡಲ್ ಅಧಿಕಾರಿಗಳಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ
3. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು ಮುಂದಿನ ಸೂಕ್ತ ಕ್ರಮಕ್ಕಾಗಿ.
4. ರಾಜ್ಯದ ಎಲ್ಲಾ ಪ್ರೌಢ ಶಾಲಾ ಮುಖ್ಯಶಿಕ್ಷಕರುಗಳಿಗೆ ಅಗತ್ಯ ಕ್ರಮಕ್ಕಾಗಿ
5. ಶಾಖಾಧಿಕಾರಿಗಳು, ಬಿ, ಸಿ & ಲೆಕ್ಕಪತ್ರ ಶಾಖೆಗೆ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ.
6. ಶಾಖಾಧಿಕಾರಿಗಳು ಗಣಕ ಶಾಖೆ ಇವರು ಈ ಅಧಿಸೂಚನೆಯನ್ನು ಮಂಡಳಿಯ ಜಾಲತಾಣ & ಶಾಲಾಲಾಗಿನ್‌ನಲ್ಲಿ ಪ್ರಕಟಿಸುವುದು ಮತ್ತು ರಾಜ್ಯದ ಎಲ್ಲಾ ಉಪನಿರ್ದೇಶಕರು (ಆಡಳಿತ) ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳ ಇಮೇಲ್‌ಗೆ ಕಳುಹಿಸುವುದು.
7. ನಿರ್ದೇಶಕರು / ಕಾರ್ಯದರ್ಶಿಗಳ ಆಪ್ತ ಶಾಖೆಯ ಮಾಹಿತಿಗಾಗಿ,
8. ಮಂಡಳಿಯ ಎಲ್ಲಾ ಪರಿಶೀಲನಾ ಶಾಖೆಯ ಶಾಖಾಧಿಕಾರಿಗಳು ಮತ್ತು ಅಧೀಕ್ಷಕರುಗಳಿಗೆ ಮಾಹಿತಿಗಾಗಿ ಹಾಗೂ ಅಗತ್ಯ ಕ್ರಮಕ್ಕಾಗಿ.
9. ಕಛೇರಿ ಪ್ರತಿ.

**ಪ್ರತಿಯನ್ನು ಗೌರವಪೂರ್ವಕವಾಗಿ :–**

ಮಾನ್ಯ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು ರವರಿಗೆ ಸಲ್ಲಿಸಿದೆ.